# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 678 |
| ಸದಸ್ಯರ ಹೆಸರು | : | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ |
| ಉತ್ತರಿಸುವ ದಿನಾಂಕ | : | 17.09.2021. |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಅನುಸೂಚಿತ ಜಾತಿ ಹಾಗೂ ಅನುಸೂಚಿತ ಪಂಗಡದ ಜನಾಂಗದವರ ಕಲ್ಯಾಣಕ್ಕಾಗಿ ಇರುವ ಯೋಜನೆಯನ್ನು ಯಾವಾಗ ಆರಂಭಿಸಲಾಯಿತು;</td><td>ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯು ಪ್ರಾರಂಭವಾದಾಗಿನಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕಾಗಿ ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.</td></tr>
<tr><td>ಆ)</td><td>ಈ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಇರುವ ಮಾನದಂಡಗಳೇನು;</td><td>ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡುವ ಇಲಾಖೆಗಳು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಜನಸಂಖ್ಯೆಗೆ ಅನುಗುಣವಾಗಿ ಅನುದಾನ ಹಂಚಿಕೆ ಮಾಡಿ, ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಬೇಕು.</td></tr>
<tr><td>ಇ)</td><td>ಕರ್ನಾಟಕದಲ್ಲಿ ಯಾವ ವರ್ಷದಿಂದ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆ ಜಾರಿಗೆ ತರಲಾಯಿತು; ಕಳೆದ ನಾಲ್ಕು ವರ್ಷಗಳ ಅವಧಿಯಲ್ಲಿ ವಿವಿಧ ಯೋಜನೆಗಳ ಅಭಿವೃದ್ಧಿ ಕಾರ್ಯಗಳಿಗಾಗಿ ಹಂಚಿಕೆ ಮಾಡಲಾದ ಅನುದಾನವೆಷ್ಟು; (ವಿವರ ಒದಗಿಸುವುದು)</td><td>ರಾಜ್ಯದಲ್ಲಿ 2014-15ನೇ ಸಾಲಿನಿಂದ ಎಸ್.ಸಿ.ಎಸ್.ಪಿ /ಟಿ.ಎಸ್.ಪಿ ಯೋಜನೆ ಜಾರಿಗೆ ತರಲಾಯಿತು. ಕಳೆದ ನಾಲ್ಕು ವರ್ಷಗಳಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಹಂಚಿಕೆ ಮಾಡಲಾದ ಅನುದಾನದ ವಿವರ ಈ ಕೆಳಗಿನಂತಿದೆ:<br>(ರೂ. ಕೋಟಿಗಳಲ್ಲಿ)
<table>
<tr><th rowspan="2">ವರ್ಷ</th><th colspan="3">ಹಂಚಿಕೆ</th></tr>
<tr><th>ಎಸ್.ಸಿ.ಎಸ್.ಪಿ</th><th>ಟಿ.ಎಸ್.ಪಿ</th><th>ಒಟ್ಟು</th></tr>
<tr><td>2017-18</td><td>19647.58</td><td>8314.76</td><td>27962.34</td></tr>
<tr><td>2018-19</td><td>21028.58</td><td>8677.27</td><td>29705.85</td></tr>
<tr><td>2019-20</td><td>19544.77</td><td>7952.75</td><td>27497.52</td></tr>
<tr><td>2020-21</td><td>18131.12</td><td>7814.78</td><td>25945.90</td></tr>
</table></td></tr>
<tr><td>ಈ)</td><td>ಈ ಯೋಜನೆಯಡಿಯಲ್ಲಿ ಒಂದೇ ಕಾಮಗಾರಿ ಪುನರಾವರ್ತನೆ ಆಗದಂತೆ ನೋಡಿಕೊಳ್ಳಲು ಇರುವ ನಿಯಮಗಳೇನು;</td><td>ಈ ಯೋಜನೆಯಡಿಯಲ್ಲಿ ಒಂದೇ ಕಾಮಗಾರಿ ಪುನರಾವರ್ತನೆ ಆಗದಂತೆ ನೋಡಿಕೊಳ್ಳಲು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯ ರಾಜ್ಯ ಅಭಿವೃದ್ಧಿ ಪರಿಷತ್‌ನಲ್ಲಿ ಅನುಮೋದನೆಗೊಂಡ ಕ್ರಿಯಾ ಯೋಜನೆಗಳಂತೆ ಅನುಷ್ಠಾನಗೊಳಿಸಲು ಎಲ್ಲಾ ಇಲಾಖೆಗಳ ಅನುಷ್ಠಾನಾಧಿಕಾರಿಗಳಿಗೆ ಸೂಚಿಸಲಾಗಿದೆ.<br><br>ಸಮಾಜ ಕಲ್ಯಾಣ ಇಲಾಖೆಯಿಂದ GPS ಆಧಾರಿತ Work Monitoring System ನ್ನು ಅಭಿವೃದ್ಧಿ ಪಡಿಸಿದ್ದು, ಕಾಮಗಾರಿಗಳು ಪುನಾರವರ್ತನೆಗೊಳ್ಳದಂತೆ ಕ್ರಮವಹಿಸಲು ಎಲ್ಲಾ ಇಲಾಖೆಗಳ ಅಧಿಕಾರಿಗಳಿಗೆ ತಿಳಿಸಲಾಗಿದೆ.</td></tr>
</table>

| | | |
|---|---|---|
| ಉ) | ಈ ಯೋಜನೆಗೆ ಹಂಚಿಕೆಯಾದ ಹಣವನ್ನು ನಿರ್ದಿಷ್ಟ ಉದ್ದೇಶಕ್ಕೆ ಬಳಸದಿದ್ದಲ್ಲಿ ಶಿಕ್ಷಣದಂತಹ ಅಭಿವೃದ್ಧಿ ಕಾರ್ಯಕ್ರಮಗಳಗೆ ಉಳಿಕೆ ಅನುದಾನವನ್ನು ಬಳಕೆ ಮಾಡುವ ಕುರಿತು ಸರ್ಕಾರದ ಅಭಿಪ್ರಾಯವೇನು? | ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆ ಅಡಿ ಕೃಷಿ ಮತ್ತು ಸಂಬಂಧಿತ ವಲಯ, ಶಿಕ್ಷಣ, ಆರ್ಥಿಕ ಅಭಿವೃದ್ಧಿ, ಕೌಶಲ್ಯಾಭಿವೃದ್ಧಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ಮೂಲಭೂತ ಸೌಕರ್ಯಗಳಗೆ ಅನುದಾನವನ್ನು ಹಂಚಿಕೆ ಮಾಡುತ್ತಿದ್ದು, ರಾಜ್ಯ ಅಭಿವೃದ್ಧಿ ಪರಿಷತ್‌ನ ಅನುಮೋದಿತ ಕ್ರಿಯಾ ಯೋಜನೆಯನ್ವಯ ಅನುದಾನವನ್ನು ಬಳಕೆ ಮಾಡಲಾಗುತ್ತಿದೆ. |

**ಸಂಖ್ಯೆ: ಸಕಇ 145 ಆರ್&ಐ 2021**

**(ಕೋಟ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು.